# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
## Karnataka Examinations Authority
KEA


ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿಆರ್-02/2025 ದಿನಾಂಕ:25-07-2025

**ಯುಜಿಸಿಇಟಿ-2025 ಮತ್ತು ಯುಜಿನೀಟ್ - 2025 ಅಣುಕು ಸೀಟು ಹಂಚಿಕೆ**
**ವೈದ್ಯಕೀಯ, ದಂತವೈದ್ಯಕೀಯ, ಇಂಜಿನಿಯರಿಂಗ್, ಕೃಷಿ ವಿಜ್ಞಾನ, ವೆಟರಿನರಿ, ಬಿಎಸ್‌ಸಿ (ನರ್ಸಿಂಗ್)**
**ಬಿ-ಫಾರ್ಮ, ಫಾರ್ಮ್-ಡಿ, ಬಿಪಿಟಿ, ಬಿಪಿಒ, ಬಿಎಸ್‌ಸಿ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳು**

- **ವೈದ್ಯಕೀಯ, ದಂತವೈದ್ಯಕೀಯ, ಇಂಜಿನಿಯರಿಂಗ್, ಕೃಷಿ ವಿಜ್ಞಾನ, ವೆಟರಿನರಿ, ಬಿಎಸ್‌ಸಿ (ನರ್ಸಿಂಗ್), ಬಿ-ಫಾರ್ಮ, ಫಾರ್ಮ್-ಡಿ, ಬಿಪಿಟಿ, ಬಿಪಿಒ, ಅಲೈಡ್‌ಹೆಲ್ತ್ ಸೈನ್ಸ್** ಕೋರ್ಸುಗಳ ಪ್ರವೇಶಕ್ಕಾಗಿ, ದಿನಾಂಕ 22-07-2025 - ಸಂಜೆ 6.00 ವರೆಗೆ ಅರ್ಹ ಅಭ್ಯರ್ಥಿಗಳು ದಾಖಲಿಸಿರುವ (Options) ಇಚ್ಛೆ / ಆಯ್ಕೆಗಳನ್ನು ದಾಖಲಿಸಿ ಮೆರಿಟ್ ಮತ್ತು ರೋಸ್ಟರ್ ಪದ್ಧತಿ ಅನುಸಾರ ಅಣುಕು ಸೀಟು ಹಂಚಿಕೆಯನ್ನು ಮಾಡಿ ಫಲಿತಾಂಶವನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ದಿನಾಂಕ ***25-07-2025*** ರಂದು ಪ್ರಕಟಿಸಲಾಗಿದೆ.
- ಈ ಅಣುಕು ಸೀಟು ಹಂಚಿಕೆ ಫಲಿತಾಂಶ ಪರಿಶೀಲಿಸಿದ ನಂತರ, ಮೊದಲನೇ ಸುತ್ತಿಗೆ ಇಚ್ಛೆ-ಆಯ್ಕೆಗಳನ್ನು ದಾಖಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಅಭ್ಯರ್ಥಿಗಳು ಈಗಾಗಲೇ ನಮೂದಿಸಿರುವ ತಮ್ಮ ಇಚ್ಛೆಗಳನ್ನು (final options) ಪರಿಷ್ಕರಿಸಲು, ಅಪ್‌ಡೇಟ್ ಮಾಡಲು, ಸೇರಿಸಲು ಅಥವಾ ಬೇಡವಾದಲ್ಲಿ ತೆಗೆದು ಹಾಕಬಹುದಾಗಿದೆ.
- ಇಲ್ಲಿಯವರೆಗೆ ಇಚ್ಛೆ / ಆಯ್ಕೆಗಳನ್ನು ದಾಖಲಿಸದೇ ಇರುವ ಅರ್ಹ ಅಭ್ಯರ್ಥಿಗಳೂ ಸಹ ಇಷ್ಟವಿದ್ದಲ್ಲಿ ರೂ.750/- ಅನ್ನು ಪಾವತಿಸಿ, ಇಚ್ಛೆ / ಆಯ್ಕೆಗಳನ್ನು ಆದ್ಯತಾ ಕ್ರಮದಲ್ಲಿ ದಾಖಲಿಸಬಹುದಾಗಿರುತ್ತದೆ.

**ಒಂದೇ ಬಾರಿ ಇಚ್ಛೆ-ಆಯ್ಕೆಗಳನ್ನು ದಾಖಲಿಸುವ ಕುರಿತು**

ಮೊದಲನೇ ಸುತ್ತಿಗೆ ಇಚ್ಛೆ-ಆಯ್ಕೆಗಳನ್ನು ದಾಖಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಮುಂದಿನ ಯಾವುದೇ ಸುತ್ತಿಗೆ ಇಚ್ಛೆ-ಆಯ್ಕೆಗಳನ್ನು ಹೊಸದಾಗಿ ಸೇರಿಸಲು ಅವಕಾಶ ಇರುವುದಿಲ್ಲ ಎಂಬುದನ್ನು ಮನನ ಮಾಡಿಕೊಂಡು, ಅಭ್ಯರ್ಥಿಗಳು ಶುಲ್ಕದ ವಿವರಗಳನ್ನು ನೋಡಿ ತಮಗೆ ಇಷ್ಟವಿರುವ ಇಚ್ಛೆ-ಆಯ್ಕೆಗಳನ್ನು ಆದ್ಯತಾ ಕ್ರಮದಲ್ಲಿ ದಾಖಲಿಸಲು ಸೂಚಿಸಿದೆ.

| PROCESS | DETAILS | DURATION / PUBLICATION |
|---|---|---|
| After Mock Results | ಅಣುಕು ಸೀಟು ಹಂಚಿಕೆಯ ಫಲಿತಾಂಶ ಪ್ರಕಟಣೆಯ ನಂತರ ಮೊದಲನೇ ಸುತ್ತಿನ ಸೀಟು ಹಂಚಿಕೆಗೆ ಇಚ್ಛೆ-ಆಯ್ಕೆಗಳನ್ನು, ಹೊಸದಾಗಿ ಸೇರಿಸಲು / ಬೇಡದಿದ್ದಲ್ಲಿ ಅಳಿಸಲು / ಕ್ರಮಾಂಕ ಬದಲಾಯಿಸಲು - ಮಾರ್ಪಡಿಸಲು. | 26-07-2025 – 12.00 pm to 29-07-2025 – 5.00 pm |
| Real Results | ಮೊದಲನೇ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶವನ್ನು ಪ್ರಕಟಿಸುವುದು | 01-08-2025 after 11.00 am |
| | ಮೊದಲನೇ ಸುತ್ತಿನ ಸೀಟು ಹಂಚಿಕೆಯ ಅಂತಿಮ ಫಲಿತಾಂಶವನ್ನು ಪ್ರಕಟಿಸುವುದು | 02-08-2025 after 2.00 pm |
| CHOICES | ಛಾಯ್ಸ್ ಗಳನ್ನು ಆಯ್ಕೆ ಮಾಡುವುದು | 04-08-2025 to 07-08-2025 |

ಯೋಗ ಮತ್ತು ನ್ಯಾಚುರೋಪತಿ ಹಾಗು ಹೋಮಿಯೋಪತಿ ಕೋರ್ಸುಗಳಿಗೆ ಸರ್ಕಾರವು ನೀಡಿರುವ ಸೀಟ್ ಮ್ಯಾಟ್ರಿಕ್ಸ್ ಅನುಸಾರ ಮತ್ತು ಆರ್ಕಿಟೆಕ್ಚರ್ ಕೋರ್ಸಿಗೆ ಕರಡು ಸೀಟ್ ಮ್ಯಾಟ್ರಿಕ್ಸ್ ಆಧರಿಸಿ ಸದರಿ ಕೋರ್ಸುಗಳಿಗೆ ಆಪ್ಷನ್ ದಾಖಲಿಸಲು ಅವಕಾಶ ನೀಡಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಸದರಿ ಕೋರ್ಸುಗಳಿಗೂ ಸಹ ಆಪ್ಷನ್ ಗಳನ್ನು ಆದ್ಯತಾ ಕ್ರಮದಲ್ಲಿ ದಾಖಲಿಸಬಹುದಾಗಿದೆ. ಅಂತಿಮ ಸೀಟ್ ಮ್ಯಾಟ್ರಿಕ್ಸ್ ಅನುಸಾರ ಸೀಟು ಹಂಚಿಕೆಯನ್ನು ಮಾಡಲಾಗುವುದು.

ಗಮನಿಸಿ:

1. ಛಾಯ್ಸ್‌ಗಳನ್ನು ಆಯ್ಕೆ ಮಾಡಿದ ನಂತರ ಅಭ್ಯರ್ಥಿಗಳು ಪಾಲಿಸಬೇಕಾದ ಪ್ರಕ್ರಿಯೆಗಳನ್ನು ಯುಜಿಸಿಇಟಿ ಮತ್ತು ಯುಜಿನೀಟ್ ಕೋರ್ಸುಗಳಿಗೆ ಪ್ರತ್ಯೇಕವಾಗಿ ಪ್ರಕಟಿಸಲಾಗುವುದು.
2. ಕಟ್ ಆಫ್ ರ್‍ಯಾಂಕ್ ಹಾಗು ಇತರೆ ವಿವರವಾದ ಸೂಚನೆಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ.
3. ಆಯುರ್ವೇದ, ಯುನಾನಿ ಕೋರ್ಸುಗಳಿಗೆ ಸೀಟ್ ಮ್ಯಾಟ್ರಿಕ್ಸ್ ನೀಡಿಲ್ಲದಿರುವ ಕಾರಣದಿಂದ ಆಪ್ಷನ್‌ಗಳನ್ನು ದಾಖಲಿಸಲು ಅವಕಾಶ ನೀಡಿರುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು.


**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in